(161+104)

(9)

11/03/26

# ಕರ್ನಾಟಕ ವಿಧಾನ ಪರಿಷತ್ತು

## ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ತಿಪ್ಪಣ್ಣ ಪ್ಪ ಕಮಕನೂರ ಹಾಗೂ ಡಾ:ತಳವಾರ ಸಾಬಣ್ಣ ಇವರುಗಳು ನಿಯಮ-72ರಡಿ ಸಲ್ಲಿಸಿರುವ ಗಮನ ಸೆಳೆಯುವ ಸೂಚನೆಗೆ ಉತ್ತರಿಸುವ ಕುರಿತು.

## ಸೂಚನೆ:-

ಕೋಲಿ, ಕಬ್ಬಲಿಗ, ಬೆಸ್ತ, ಅಂಬಿಗ, ಮತ್ತು ಬಾರ್ಕಿ ಈ ಐದು ಪದಗಳನ್ನು ಪರಿಶಿಷ್ಟ ವರ್ಗದ (ST) ಪಟ್ಟಿಗೆ ಸೇರಿಸುವ ಪ್ರಸ್ತಾವನೆಯ ಸ್ಥಿತಿಗತಿಯ ಕುರಿತು ನಿಯಮ 72ರ ಅಡಿಯಲ್ಲಿ ಮಾನ್ಯ ಮುಖ್ಯಮಂತ್ರಿಗಳ ಗಮನ ಸೆಳೆಯಬಯಸುತ್ತೇನೆ.

## ಉತ್ತರ:-

ಸರ್ಕಾರದ ಆದೇಶ ಸಂಖ್ಯೆ:ಸಕಇ 119 ಎಸ್ಎಡಿ 2006, ದಿನಾಂಕ:08/04/2010 ರ ಆದೇಶದಲ್ಲಿ ರಾಜ್ಯದಲ್ಲಿನ ಗಂಗಾಮತ ಮತ್ತು ಅದರ ಉಪ ಜಾತಿಗಳ (ಕೋಲಿ, ಕಬ್ಬಲಿಗ, ಬೆಸ್ತ, ಅಂಬಿಗ ಮತ್ತು ಬಾರ್ಕಿ ಒಳಗೊಂಡಂತೆ) ರಾಜ್ಯದ ಪರಿಶಿಷ್ಟ ಪಂಗಡದ ಪಟ್ಟಿಗೆ ಸೇರಿಸಲು ಕನ್ನಡ ವಿಶ್ವವಿದ್ಯಾಲಯ ಹಂಪಿ ಇವರ ಮೂಲಕ ಕುಲಶಾಸ್ತ್ರೀಯ ಅಧ್ಯಯನ ಕೈಗೊಂಡು ವರದಿ ಪಡೆದು ಸಲ್ಲಿಸಲು ಆದೇಶಿಸಲಾಗಿದೆ.

ಸರ್ಕಾರದ ಆದೇಶದನ್ವಯ ಗಂಗಾಮತ ಮತ್ತು ಅದರ ಉಪ ಜಾತಿಗಳ ಕುಲಶಾಸ್ತ್ರೀಯ ಅಧ್ಯಯನವನ್ನು ಕನ್ನಡ ವಿಶ್ವವಿದ್ಯಾಲಯ, ಹಂಪಿ ಇವರ ಮೂಲಕ ಕೈಗೊಂಡು ಅಂತಿಮ ವರದಿಯನ್ನು ದಿನಾಂಕ:17/02/2014 ರಂದು ಕರ್ನಾಟಕ ರಾಜ್ಯ ಬುಡಕಟ್ಟು ಸಂಶೋಧನಾ ಸಂಸ್ಥೆ, ಮೈಸೂರು ರವರ ಮೂಲಕ ಸರ್ಕಾರಕ್ಕೆ ಸಲ್ಲಿಸಲಾಗಿತ್ತು. ರಾಜ್ಯ ಸರ್ಕಾರದ ಶಿಫಾರಸ್ಸಿನೊಂದಿಗೆ ಕೇಂದ್ರ ಬುಡಕಟ್ಟು ವ್ಯವಹಾರಗಳ ಮಂತ್ರಾಲಯ ನವದೆಹಲಿ ಇವರಿಗೆ ದಿನಾಂಕ:03/03/2014 ರಲ್ಲಿ ಮೊದಲ ಬಾರಿಗೆ ಕಳುಹಿಸಲಾಗಿರುತ್ತದೆ.

ಕರ್ನಾಟಕ ರಾಜ್ಯದಲ್ಲಿ ಗಂಗಾಮತ ಮತ್ತು ಅದರ ಉಪ ಜಾತಿಗಳನ್ನು ಪರಿಶಿಷ್ಟ ಪಂಗಡದ ಪಟ್ಟಿಗೆ ಸೇರಿಸುವ ಬಗ್ಗೆ ಸಲ್ಲಿಸಲಾದ ಪ್ರಸ್ತಾವನೆಗೆ ಕೇಂದ್ರ ರಿಜಿಸ್ಟ್ರಾರ್ ಜನರಲ್ ಆಫ್ ಇಂಡಿಯಾ ರವರು ಪ್ರಸ್ತಾಪಿಸಿರುವ ಅಂಶಗಳ ಬಗ್ಗೆ ಪರಿಶೀಲಿಸಿ ಸಮರ್ಥನೆ/ಸ್ಪಷ್ಟೀಕರಣ/ದಾಖಲಾತಿಗಳೊಂದಿಗೆ ವರದಿಗಳನ್ನು ದಿನಾಂಕ:16.02.2018, 23.07.2018 ಮತ್ತು 02.02.2021ರಲ್ಲಿ ಸಲ್ಲಿಸಲಾಗಿರುತ್ತದೆ.

ಅಂತಿಮವಾಗಿ, ಕೇಂದ್ರ ರಿಜಿಸ್ಟ್ರಾರ್ ಜನರಲ್ ಆಫ್ ಇಂಡಿಯಾ ರವರು ದಿನಾಂಕ:30.10.2023ರ ಪತ್ರದಲ್ಲಿ ಪ್ರಸ್ತಾಪಿಸಿರುವ ಅಂಶಗಳ ಬಗ್ಗೆ ಪರಿಶೀಲಿಸಿ ಮತ್ತೊಮ್ಮೆ ಸೂಕ್ತ ಸಮರ್ಥನೆ/ಸ್ಪಷ್ಟೀಕರಣ/ದಾಖಲಾತಿಗಳೊಂದಿಗೆ ವರದಿಯನ್ನು ಸಲ್ಲಿಸುವಂತೆ ಕುಲಸಚಿವರು, ಕನ್ನಡ ವಿಶ್ವ ವಿದ್ಯಾಲಯ, ಹಂಪಿ ರವರಿಗೆ ಕೋರಲಾಗಿದ್ದು, ಕುಲಸಚಿವರು, ಕನ್ನಡ ವಿಶ್ವ ವಿದ್ಯಾಲಯ, ಹಂಪಿ ರವರಿಂದ ವರದಿ ಬಂದ ತಕ್ಷಣ ಸರ್ಕಾರಕ್ಕೆ ಮಾಹಿತಿಯನ್ನು ಸಲ್ಲಿಸಲಾಗುವುದು.

ಮುಂದುವರಿದು, ಕೋಲಿ, ಕಬ್ಬಲಿಗ, ಅಂಬಿಗ, ಬೆಸ್ತ ಜಾತಿಗಳನ್ನು ಈಗಾಗಲೇ ಕರ್ನಾಟಕದ ಪರಿಶಿಷ್ಟ ಪಂಗಡದ ಪಟ್ಟಿಯಲ್ಲಿರುವ ಜಾತಿಗಳಾದ ಟೋಕರೆ ಕೋಳಿ, ಕೋಯಾ ಕೋಳಿಧೋರ, ಕೋಲ್ಹಾ ಜಾತಿಗಳ ಪರ್ಯಾಯ ಪದಗಳೆಂದು ಪರಿಗಣಿಸಲು ಹೊಸದಾಗಿ ಕುಲಶಾಸ್ತ್ರೀಯ ಅಧ್ಯಯನವನ್ನು ಕೈಗೊಳ್ಳಲು ಕರ್ನಾಟಕ ರಾಜ್ಯ ಬುಡಕಟ್ಟು ಸಂಶೋಧನಾ ಸಂಸ್ಥೆ ಮೈಸೂರು ರವರಿಂದ ದಿನಾಂಕ:19.02.2026 ಪ್ರಸ್ತಾವನೆ ಸ್ವೀಕೃತವಾಗಿದ್ದು, ಸರ್ಕಾರದ ಹಂತದಲ್ಲಿ ಪರಿಶೀಲಿಸಲಾಗುತ್ತಿದೆ.

ಸಂಖ್ಯೆ: STW/SECA/RI/3/2026

(ಸಿದ್ದರಾಮಯ್ಯ)
ಮುಖ್ಯಮಂತ್ರಿಗಳು